**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಮಂಡ್ಯ**

**ಸಿ.ಸಿ. 1519/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | ವಿನಯ್ ಎಂ.ಕೆ. | ಪ್ರಮಾಣ ವಚನ ಬೋಧಿಸಿದ ದಿನಾಂಕ | 21-11-2025 |
| ತಂದೆಯ ಹೆಸರು | ಎಂ.ಕೃಷ್ಣ | | |
| ವಯಸ್ಸು | 24 ವರ್ಷ | | |
| ವೃತ್ತಿ | ವಿದ್ಯಾರ್ಥಿ | ಚಾಸಾ | 1 |
| ವಾಸಸ್ಥಳ | ಮಂಡ್ಯ | ಪ್ರಾಸಾ | 1 |

## ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-

ಸಾಕ್ಷಿಗೆ ದೂರಿನಲ್ಲಿರುವ ಸಹಿಯನ್ನು ನೋಡಲಾಗಿ ದೂರನ್ನು ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಚಾಸಾ-2 ನನ್ನ ಮಾವ. ನಿಪಿ-1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಾನು ಆರೋಪಿತರನ್ನು ನೋಡಿಲ್ಲ. ದಿಃ 10-03-2023 ರಂದು ಅಪಘಾತವಾಗಿರುತ್ತದೆ, ವಿಚಾರ ತಿಳಿದು ಆಸ್ಪತ್ರೆಗೆ ಬಂದು ಹೋಗಿರುತ್ತೇನೆ. ನಂತರ ನಾನು ಎಂ.ಎಲ್ .ಸಿ. ಗೆ ಸಹಿ ಮಾಡಿರುತ್ತೇನೆ. ನನಗೆ ಅಪಘಾತದ ವಿಚಾರ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಗಿದೆ)

**ಪಾಟೀ ಸವಾಲು :– ಮಾನ್ಯ ಎಪಿಪಿಯವರಿಂದ :–**

ದಿಃ 10–04–2023 ರಂದು ಬೆಳಗೆ ನನಗೆ 10.20 ಗಂಟೆ ಸಮಯದಲ್ಲಿ ನನ್ನ ಸಂಬಂಧಿಕರು ಫೋನ್ ಮಾಡಿ ನನ್ನ ತಂದೆಗೆ ಅಪಘಾತವಾಗಿರುತ್ತದೆ ಎಂದು ತಿಳಿಸಿರುತ್ತಾರೆ. ನಂತರ ನಾನು ಆಸ್ಪತ್ರೆಗೆ ಬಂದು ತಂದೆಯ ಕಾಲಲ್ಲಿ ಪೆಟ್ಟಾಗಿರುತ್ತದೆ ಎಂದರೆ ಸರಿ. ಅಪಘಾತವು ಮಂಡ್ಯ ಸಿಟಿಯ ಗುತ್ತಲು ಬಳಿ ಅಪಘಾತವಾಗಿರುತ್ತದೆ ಎಂದು ಕೇಳಿ ತಿಳಿದುಕೊಂಡಿರುತ್ತೇನೆಂದರೆ ಸರಿ. ಈ ಬಗ್ಗೆ ನಾನು ಪೋಲಿಸ್ ಠಾಣೆಗೆ ದೂರು ಕೊಟ್ಟಿರುತ್ತೇನೆಂದರೆ ಸರಿ ಅಪಘಾತದ ಬಗ್ಗೆ ನನ್ನ ತಂದೆಯನ್ನು ವಿಚಾರ ಮಾಡಲಾಗಿ ದಿಃ 10–04–2023 ರಂದು ಬೆಳಗ್ಗೆ 10 ಗಂಟೆ ಸಮಯದಲ್ಲಿ ಮನೆಯಿಂದ ಮೋಟಾರ್ ಬೈಕ್ ನಂಬರ್ ಕೆಎ–41–ಕೆ463 ಫ್ಯಾಕ್ಟರಿ ಸರ್ಕಲ್ ಗೆ ಕೆಲಸದ ನಿಮಿತ್ತ ಬರುತ್ತಿದ್ದಾಗ ಮಾನಸ ಮೆಡಿಕಲ್ ಸಮೀಪ ಬೆಳಗಗೆ 10–40 ರಲ್ಲಿ ಹಿಂದಿನಿಂದ ಬಂದ ಕಾರಿನ ಚಾಲಕ ತನಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಬಂದು ಡಿಕ್ಕಿ ಪಡಿಸಿರುತ್ತಾರೆ ಎಂದು ನನಗೆ ಹೇಳಿತ್ತಾರೆ ಎಂದರೆ ಸರಿಯಲ್ಲ. ನನಗೆ ಅಪಘಾತದ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು:– ಆರೋಪಿ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ಶಿವಕುಮಾರ ಜಿ.ಜೆ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಮಂಡ್ಯ.